# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 901 (1133) |
| ಉತ್ತರಿಬೇಕಾದ ದಿನಾಂಕ | : 23.02.2024 |
| ಉತ್ತರಿಸಬೇಕಾದವರು | : ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಸದರಿ ಹಾಸ್ಟೆಲ್‌ಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1226 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಹಾಗೂ 680 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ ಪ್ರಸ್ತುತ ದಾಖಲಾದ ವಿದ್ಯಾರ್ಥಿಗಳ ವಿವರ ಕೆಳಕಂಡಂತಿದೆ.<br><table><tr><th>ಕ್ರ. ಸಂ</th><th>ನಿಲಯಗಳ ವಿವರ</th><th>ಸಂಖ್ಯೆ</th><th>ದಾಖಲಾತಿ ಸಂಖ್ಯೆ</th></tr><tr><td>01</td><td>ಮೆಟ್ರಿಕ್ ಪೂರ್ವ ವಿ ನಿಲಯಗಳು</td><td>1226</td><td>1,00,459</td></tr><tr><td>02</td><td>ಮೆಟ್ರಿಕ್ ನಂತರ ವಿ ನಿಲಯಗಳು</td><td>680</td><td>1,10,121</td></tr><tr><td></td><td>ಒಟ್ಟು :-</td><td>**1906**</td><td>**2,10,580**</td></tr></table> |
| ಆ) | ಮಾಸಿಕವಾಗಿ ಪ್ರತಿ ವಿದ್ಯಾರ್ಥಿಗೆ ಊಟಕ್ಕಾಗಿ ಸರ್ಕಾರ ಮಾಡುವ ವೆಚ್ಚವೆಷ್ಟು; | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಮಾಸಿಕವಾಗಿ ವೆಚ್ಚ ಮಾಡಲಾಗುತ್ತಿರುವ ಭೋಜನಾ ವೆಚ್ಚ ಕೆಳಕಂಡಂತಿದೆ.<br><table><tr><th>ಕ್ರ. ಸಂ</th><th>ನಿಲಯಗಳ ವಿವರ</th><th>ದರ</th></tr><tr><td>01</td><td>ಮೆಟ್ರಿಕ್ ಪೂರ್ವ ವಿ ನಿಲಯಗಳ ವಿದ್ಯಾರ್ಥಿಗಳಿಗೆ</td><td>1650/-</td></tr><tr><td>02</td><td>ಮೆಟ್ರಿಕ್ ನಂತರ ವಿ ನಿಲಯಗಳ ವಿದ್ಯಾರ್ಥಿಗಳಿಗೆ</td><td>1750/-</td></tr></table> |
| ಇ) | ಹಲವು ವಸತಿ ನಿಲಯಗಳಲ್ಲಿ ಕಳಪೆ ಮತ್ತು ಉಪಯೋಗಿಸಲಾಗದ ಸ್ಥಿತಿಯಲ್ಲಿರುವ ಆಹಾರವನ್ನು ವಿದ್ಯಾರ್ಥಿಗಳಿಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ರೀತಿಯ ಆಹಾರ ಪದಾರ್ಥಗಳನ್ನು ಪೂರೈಕೆ ಮಾಡಿದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; | **ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಪೂರೈಕೆ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುತ್ತಿದೆ.**<br>1. ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಊಟೋಪಚಾರವನ್ನು ನೀಡಲು ಮೂರು ವಿಭಾಗವಾರು (ಕರಾವಳಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ) ಪರಿಷ್ಕೃತ ಮೆನು ಚಾರ್ಟ್ ನಂತೆ ವಿದ್ಯಾರ್ಥಿಗಳಿಗೆ ಊಟೋಪಚಾರವನ್ನು ನೀಡಲಾಗುತ್ತಿದೆ.<br>2. ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023 ಬೆಂಗಳೂರು ದಿನಾಂಕ: 05-05-2023 ರಲ್ಲಿ ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ. ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಚತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitazition committee ಯನ್ನು ರಚಿಸಲಾಗಿರುತ್ತದೆ. |
| ಈ) | ಮಕ್ಕಳಿಗೆ ಉತ್ತಮ ಗುಣಮಟ್ಟದ ಆಹಾರ ಪೂರೈಕೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | |

3. ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡುವ ಬಗ್ಗೆ ಪರಿಷ್ಕೃತ ಆದೇಶವನ್ನು ಹೊರಡಿಸಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ: ಸಕಇ 97 ಪಕವಿ 2023. ದಿ: 28-07-2023)
4. ಈ ಕಛೇರಿ ಸುತ್ತೋಲೆ ಸಂಖ್ಯೆ:SWD/EDU/ED-7/20/2023/1065640 ರಲ್ಲಿ Freak Rate ನಮೂದಿಸುವ Bid ದಾರರನ್ನು ತಿರಸ್ಕರಿಸಲು ಮಾರ್ಗಸೂಚಿ ಹೊರಡಿಸಲಾಗಿರುತ್ತದೆ.
5. ಈ ಕಛೇರಿ ಸುತ್ತೋಲೆ ಸಂಖ್ಯೆ:SWD/EDU/ED7/20/2023/1065640, ದಿನಾಂಕ:07-10-2023ರಲ್ಲಿ ಗುತ್ತಿಗೆದಾರರು ಸರಬರಾಜು ಮಾಡುವ ಆಹಾರ ಪದಾರ್ಥಗಳ ಮಾದರಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಪ್ರದರ್ಶಿಸಲು ಸುತ್ತೋಲೆ ಹೊರಡಿಸಲಾಗಿರುತ್ತದೆ.
6. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: 198 ಆರ್ & ಐ 2022. ದಿನಾಂಕ: 21-12-2023 ರನ್ವಯ ಪ್ರತಿ ಜಿಲ್ಲೆಗೂ ರಾಜ್ಯ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜನೆ ಮಾಡಲಾಗಿರುತ್ತದೆ.
7. ಸರ್ಕಾರದ ಆದೇಶ ಸಂಖ್ಯೆ SWD/EDU/ED4/80/2023 C-1161067 ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶೀಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಬೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ.
8. ಜಿಲ್ಲಾ ಮಟ್ಟದ ಅಧಿಕಾರಿಗಳು ಖುದ್ದು ಭೇಟಿ ನೀಡಿ ರುಚಿ/ಸಾಧಾರಣ ರುಚಿ ಹೊಂದಿರುವ ನಿಲಯಗಳಿಗೆ ಭೇಟಿ ನೀಡಿದ ಸಮಯದಲ್ಲಿ Taste Rigister ನಲ್ಲಿ ನಮೂದಿಸಿ, ಕೇಂದ್ರ ಕಛೇರಿಗೆ ವರದಿ ಮಾಡಲು ಆಯುಕ್ತರಿಂದ ದಿನಾಂಕ:19-09-2023 ರಲ್ಲಿ ಸುತ್ತೋಲೆ ಹೊರಡಿಸಲಾಗಿದೆ .
9. ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗೆ ಆಹಾರ ತಯಾರಿಕೆ ಹಾಗೂ ಶುಚಿತ್ವ ಕಾಪಾಡುವ ಬಗ್ಗೆ ಜಿಲ್ಲಾ ಹಂತದಲ್ಲಿ ತರಬೇತಿ ನೀಡಲು ಆದೇಶ ಹೊರಡಿಸಲಾಗಿರುತ್ತದೆ.

ಮುಂದುವರೆದು, ಪಡಿತರ ಆಹಾರ ಧಾನ್ಯಗಳನ್ನು ಮಾಹೆಯಾನ ಎತ್ತುವಳಿ ಮಾಡಿ ಸದರಿ ಎತ್ತುವಳಿಯಾದ ಆಹಾರ ಪದಾರ್ಥಗಳನ್ನು ಸ್ವಚ್ಛಗೊಳಿಸಿ ದಾಸ್ತಾನು ಕೊಠಡಿಯಲ್ಲಿ ಸುರಕ್ಷಿತವಾಗಿ ಶೇಖರಿಸಿಡುವಂತೆಯೂ ಸಹ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ

**ಸಕಇ 116 ಪಕವಿ 2024**

**(ಡಾ|| ಹೆಚ್.ಸಿ ಮಹದೇವಪ್ಪ)**
**, ಸಮಾಜ ಕಲ್ಯಾಣ ಸಚಿವರು**